ದಿನಾಂಕಃ 05.06.2026 ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**<u>ಪಾಟೀ ಸವಾಲು : 1ನೇ ಎದುರುದಾರರ ಪರ ವಕೀಲರಿಂದ :</u>**

ಯಾವುದೇ ವ್ಯವಹಾರ ಮಾಡಬೇಕಾದರೆ ಸಂಬಂಧಿಸಿದ ಸಂಸ್ಥೆಯಿಂದ ಪರವಾನಗಿ ಪಡೆಯಬೇಕು ಎಂದರೆ ಸರಿ. ಪಂಚಾಯಿತಿಯಿಂದ ನನ್ನ ಮಗ ಹೋಟೆಲ್ ನಡೆಸಲು ಪರವಾನಗಿ ಪಡೆದಿರುತ್ತಾನೆ. ಸದರಿ ಹೋಟೆಲಿಗೆ ನಾನು ಮಾಲೀಕನಲ್ಲ ಎಂದರೆ ಸರಿ. ನನ್ನ ಮಗ ವ್ಯವಹಾರ ಮಾಡುತ್ತಿದ್ದು, ನಾನು ಯಾವುದೇ ವ್ಯವಹಾರ ಮಾಡುತ್ತಿಲ್ಲ ಎಂದರೆ ನನ್ನ ಮಗನ ಹೆಸರಿನಲ್ಲಿ ಲೈಸೆನ್ಸ್ ಪಡೆದಿದ್ದು, ನಾನು ಹೋಟೆಲ್ ನಡೆಸುತ್ತಿದ್ದೇನೆ ಎನ್ನುತ್ತಾರೆ. ನಾನು ಹೋಟೆಲ್ ನಡೆಸುತ್ತಿರುವ ಬಗ್ಗೆ ಯಾವುದೇ ದಾಖಲೆಯನ್ನು ನ್ಯಾಯಾಲಯಕ್ಕೆ ಕೊಟ್ಟಿಲ್ಲ ಎಂದರೆ ಸರಿ. ಸದರಿ ಹೋಟೆಲನ್ನು ನಾನು ನಡೆಸುತ್ತಿಲ್ಲ ಹಾಗಾಗಿ ಈ ಪ್ರಕರಣದಲ್ಲಿ ಸಾಕ್ಷಿ ಹೇಳಲು ನನಗೆ ಅರ್ಹತೆ ಇಲ್ಲ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮಗ ವ್ಯವಹಾರ ಮಾಡುತ್ತಿರುವುದಕ್ಕೂ ಸಹ ನಾನು ದಾಖಲಾತಿ ಕೊಟ್ಟಿರುವುದಿಲ್ಲ ಎಂದರೆ ಸರಿ. ಪ್ರತಿವರ್ಷ ಆದಾಯ ತೆರಿಗೆಯನ್ನು ಕಟ್ಟಬೇಕು ಎಂದರೆ ಸರಿ. ಆದಾಯ ತೆರಿಗೆಯಲ್ಲಿ ಆದಾಯದ ಮೂಲಗಳು ಹಾಗೂ ಖರ್ಚನ್ನು ತೋರಿಸಬೇಕು ಎಂದರೆ ಸರಿ. ನಾನು ವ್ಯವಹಾರಗಳನ್ನು ಬ್ಯಾಂಕ್ ಮೂಲಕವೇ ಮಾಡುತ್ತೇನೆ ಎಂದರೆ ಸರಿ. ನಾನು ಆದಾಯ ತೆರಿಗೆ ದಾಖಲೆಗಳನ್ನು ಕೊಟ್ಟಿಲ್ಲ ಎಂದರೆ ಸಾಕ್ಷಿ ನಾನು ಆದಾಯ ತೆರಿಗೆ ಪಾವತಿ ಮಾಡುತ್ತಿಲ್ಲ ಎನ್ನುತ್ತಾರೆ. ಮೃತರಿಂದ ಹಾಲನ್ನು ಖರೀದಿಸುತ್ತಿರಲಿಲ್ಲ ಎಂದರೆ ಸರಿಯಲ್ಲ. ಹಾಲು ಖರೀದಿಸಿದ ಬಗ್ಗೆ ದಾಖಲೆ ಕೊಟ್ಟಿಲ್ಲ ಎಂದರೆ ಸಾಕ್ಷಿ ರಶೀದಿ ಕೊಡುವುದಿಲ್ಲ, ವಾರಕ್ಕೊಮ್ಮೆ ಹಣ ಪಾವತಿ ಮಾಡುತ್ತಿದ್ದೆ ಎನ್ನುತ್ತಾರೆ. ಫೋಟೋಗಳನ್ನು ಪ್ರಕರಣಕ್ಕೆ ಅನುಕೂಲವಾಗಲೆಂದು

ಸೃಷ್ಟಿಸಿರುತ್ತೇವೆ ಎಂದರೆ ಸರಿಯಲ್ಲ. ನಾನು 6ನೇ ತರಗತಿಯವರೆಗೆ ಓದಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಕನ್ನಡದಲ್ಲಿ ಬರೆದಿರುತ್ತದೆ. ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲದಿದ್ದರೂ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು : 2ನೇ ಎದುರುದಾರರ ಪರ ವಕೀಲರಿಂದ :</u>**

(1ನೇ ಎದುರುದಾರರ ಪಾಟೀ ಸವಾಲನ್ನು ಅನುಮೋದಿಸಿಕೊಂಡು ಮುಂದುವರೆದ ಪಾಟೀ ಸವಾಲನ್ನು ಮಾಡಿರುತ್ತಾರೆ).

ಅರ್ಜಿದಾರರು ನಮ್ಮ ಊರಿನವರು ಎಂದರೆ ಸರಿ. ಅರ್ಜಿದಾರರು ನಮ್ಮ ಸಂಬಂಧಿಕರು ಎಂದರೆ ಸುಳ್ಳು. ನಗದು ರೂಪದಲ್ಲಿ ಮೃತರಿಗೆ ಹಣ ಪಾವತಿ ಮಾಡುತ್ತಿದ್ದೆ. ನಾನು ಹಾಲು ವ್ಯಾಪಾರ ಮಾಡದೇ ಇದ್ದರೂ ಅರ್ಜಿದಾರರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಎಂ.ಎ.ಸಿ.ಟಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**